ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಶೈ.ಶಾ/ದ್ವಿ.ಪಿ.ವಿ.ದಾ/2021-22

ದಿನಾಂಕ: 13-10-2021.

## ಸುತ್ತೋಲೆ.

ವಿಷಯ: ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ವಿಳಂಬ ದಾಖಲಾತಿ ನೀಡುವ ಬಗ್ಗೆ.

ಉಲ್ಲೇಖ: 1. ಪಪೂಶಿಇ/ಶೈಶಾ/ದ್ವಿ.ಪಿ.ದಾ/2021-22, ದಿನಾಂಕ:31-08-2021.

*********

2021-22ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ದಾಖಲಾತಿ ಪ್ರಕಿಯೆಗಳು ಈಗಾಗಲೇ ಪೂರ್ಣಗೊಂಡಿದ್ದು, ಉಲ್ಲೇಖ-01ರನ್ವಯ ದಾಖಲಾತಿಗೆ ದಿನಾಂಕ 05-10-2021.ರವರೆಗೆ ವಿಸ್ತರಿಸಿ ಅವಕಾಶ ನೀಡಲಾಗಿತ್ತು. ಆದಾಗ್ಯೂ ಹಲವಾರು ವಿದ್ಯಾರ್ಥಿಗಳು ಹಾಗೂ ಪೋಷಕರು ಕಾರಣಾಂತರಗಳಿಂದ ದಾಖಲಾತಿ ಮಾಡಲು ಸಾಧ್ಯವಾಗಿಲ್ಲವೆಂದು ಹಾಗೂ ವಿದ್ಯಾರ್ಥಿಗಳಿಗೆ ದಾಖಲಾತಿಗೆ ಅವಕಾಶ ಮಾಡಿಕೊಡಬೇಕೆಂದು ಕೋರಿ ರಾಜ್ಯದ ವಿವಿಧ ಭಾಗಗಳಿಂದ ಮನವಿಗಳು ಬಂದಿರುತ್ತವೆ. ಈ ಹಿನ್ನಲೆಯಲ್ಲಿ ಆಯಾ ಜಿಲ್ಲೆಗಳ ಉಪನಿರ್ದೇಶಕರು ಕಾಲೇಜುಗಳಿಂದ ಮನವಿಗಳನ್ನು ಪಡೆದು ಪಟ್ಟಿಯನ್ನು ಸಿದ್ಧಪಡಿಸಿ ಕೇಂದ್ರ ಕಛೇರಿಯಿಂದ ಅನುಮತಿ ಪಡೆದು, ಪಟ್ಟಿಯಲ್ಲಿದ್ದವರಿಗೆ ಮಾತ್ರ ದಾಖಲಾತಿಗೆ ಅನುಮತಿ ನೀಡುವುದು. ಆಯಾ ಜಿಲ್ಲಾ ಉಪನಿರ್ದೇಶಕರು ಕ್ರೂಢೀಕೃತ ಪಟ್ಟಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ದಿನಾಂಕ:19-10-2021 ಕೊನೆಯ ದಿನ ಆಗಿರುತ್ತದೆ.

ಈ ದಾಖಲಾತಿಯನ್ನು ವಿಶೇಷ ದಂಡಶುಲ್ಕದೊಂದಿಗೆ (ರೂ.2890=00. ಎರಡು ಸಾವಿರದ ಎಂಟು ನೂರ ತೊಂಭತ್ತು ಮಾತ್ರ.) ಮಾಡಿಕೊಳ್ಳುವುದು. ಇನ್ನು ಮುಂದೆ ಯಾವುದೇ ಕಾರಣಕ್ಕೂ ದಾಖಲಾತಿಗೆ ಅವಕಾಶವಿರುವುದಿಲ್ಲವೆಂದು ಸ್ಥಳೀಯ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಲು ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಯನ್ನು:

1. ರಾಜ್ಯದ ಎಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಮಾನ್ಯ ನಿರ್ದೇಶಕರ ಆಪ್ತಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.